# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 11/04/2019

---

## ಹಣಕ್ಕಾಗಿ ಕರೆ: ಸಚಿವ ಪುಟ್ಟರಾಜು, ಮಾದೇಗೌಡ ವಿರುದ್ಧ ಎಫ್ಐಆರ್

**ಮಂಡ್ಯ:** ಚುನಾವಣಾ ಪ್ರಚಾರದ ವೆಚ್ಚಕ್ಕಾಗಿ ಹಣ ನೀಡುವಂತೆ ಮಾಜಿ ಸಂಸದ ಜಿ. ಮಾದೇಗೌಡ ಅವರು ಜಿಲ್ಲಾ ಉಸ್ತುವಾರಿ ಸಚಿವ ಸಿ.ಎಸ್.ಪುಟ್ಟರಾಜು ಅವರನ್ನು ಕೋರಿದ್ದ ಆಡಿಯೋ ವೈರಲ್ ಆಗಿದ್ದ ಹಿನ್ನೆಲೆಯಲ್ಲಿ ಇವರಿಬ್ಬರ ವಿರುದ್ಧ ಮಂಡ್ಯ ಪಶ್ಚಿಮ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ಸಂಭಾಷಣೆ ಏ. 8ರಂದು ಮಾಧ್ಯಮಗಳಲ್ಲೂ ಈ ವಿಷಯ ಪ್ರಕಟವಾಗಿತ್ತು. ಇದರ ಆಧಾರದ ಮೇಲೆ ಫ್ಲೈಯಿಂಗ್ ಸ್ಕ್ವಾಡ್ ತಂಡದ ಅಧಿಕಾರಿಯಾದ ಲೋಕೋಪಯೋಗಿ ಇಲಾಖೆಯ ಕಿರಿಯ ಎಂಜಿನಿಯರ್ ಜಗದೀಶ್ ಅವರು ಏ. 8ರಂದು ಪೊಲೀಸರಿಗೆ ದೂರು ನೀಡಿದ್ದರು.

ಈ ಹಿನ್ನೆಲೆಯಲ್ಲಿ ಕಾನೂನು ರೀತಿ ಎಫ್ಐಆರ್ ದಾಖಲಿಸುವಂತೆ ಸಹಾಯಕ ಚುನಾವಣಾಧಿಕಾರಿಗಳು ಸೂಚನೆ ನೀಡಿದ್ದಾರೆ. ಮತದಾರರಿಗೆ ಆಮಿಷವೊಡ್ಡುವ ಸಲುವಾಗಿ ಫೋನಿನಲ್ಲಿ ಸಂಭಾಷಣೆ ನಡೆಸಿರುವುದು ಕಂಡು ಬಂದಿದೆ. ಹಾಗಾಗಿ ಐಪಿಸಿ ಸೆಕ್ಷನ್ 171(ಇ) ಪ್ರಕಾರ ದೂರು ದಾಖಲಿಸಿಕೊಂಡರು. ನ್ಯಾಯಾಲಯ ಅನುಮತಿ ನೀಡಿದ ಬಳಿಕ ಎಫ್ಐಆರ್ ದಾಖಲಾಗಿದೆ.